ಅಂತರ್ಜಲ ಮಟ್ಟ ಹೆಚ್ಚಿಸಲು ಸುವರ್ಣ ಆಣೆ ಎಂಬ ಕಾರ್ಯಕ್ರಮವನ್ನು ನಬಾರ್ಡ್ ಸಾಲದ ನೆರವಿನೊಂದಿಗೆ ಹಮ್ಮಿಕೊಳ್ಳಲಾಗಿದೆ ಈ ಕಾರ್ಯಕ್ರಮದಡಿ ಚಿಕ್ಕಬಳ್ಳಾಪುರ ತಾಲ್ಲೂಕಿಗೆ ರೂ 40 00 ಲಕ್ಷ ನಿಗದಿಯಾಗಿರುತ್ತದೆ ಅಲ್ಲದೆ 2007–08ರ ಬಜೆಟ್ ಭಾಷಣದಲ್ಲಿ ನೀರಾವರಿ ಕೆರೆಯ ಹೂಳು ತೆಗೆಯಲು ಹೆಚ್ಚವರಿ ಅನುದಾನ ಒದಗಿಸುವುದಾಗಿ ಪ್ರಸ್ತಾಪಿಸಲಾಗಿದ್ದು, ಸುವರ್ಣ ಆಣೆ ಕಾರ್ಯಕ್ರಮದ ಜೊತೆಗೆ ಹೆಚ್ಚುವರಿ ಅನುದಾನ ಹೂಳು ತೆಗೆಯುವ ಕಾರ್ಯಕ್ರಮಕ್ಕೆ ಲಭ್ಯವಾಗಬಹುದು

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ **1202(1295)**
ಸದಸ್ಯರ ಹೆಸರು **ಶ್ರೀ ಪಾಟೀಲ್ ಎಂ ವೈ(ಆಫ್ಜಲ್ ಪುರ್)**
ಉತ್ತರಿಸುವವರು **ಶ್ರೀ ಎಸ್ ಎ ರವೀಂದ್ರನಾಥ್ (ಗ್ರಾಮೀಣ ನೀರು ಸರಬರಾಜು, ನೈರ್ಮಲ್ಯ ಹಾಗೂ ಸಕ್ಕರೆ ಸಚಿವರು)**

ಅ) ಗುಲ್ಬರ್ಗಾ ತಾಲ್ಲೂಕಿನ ಶರಣಸಿರಸಗಿ, ಸಿಂಧಗಿ, ತಾಜ್‌ಸುಲ್ತಾನಪುರ್, ಹಿರಾಪುರ ಗ್ರಾಮಗಳು ಗುಲ್ಬರ್ಗಾ ನಗರಕ್ಕೆ ಹೊಂದಿಕೊಂಡಿರುವುದು ನಿಜವಲ್ಲವೇ,

ನಿಜ

ಆ) ಈ ಗ್ರಾಮಗಳಿಗೆ ಕುಡಿಯುವ ನೀರಿನ ತೊಂದರೆ ಬಹಳಷ್ಟಿದ್ದು, ಅಲ್ಲಿನ ಕೊಳವೆ ಬಾವಿಗಳು ಬತ್ತಿಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ,

ಬಂದಿದೆ

ಇ) ಬಂದಿದ್ದಲ್ಲಿ, ಗುಲ್ಬರ್ಗಾ ನಗರಕ್ಕೆ ಕುಡಿಯುವ ನೀರಿನ 3 ಯೋಜನೆಗಳು ಲಭ್ಯವಿರುವುದರಿಂದ ಆ ಯೋಜನೆಗಳ ಮುಖೇನ ಈ ಗ್ರಾಮಗಳಿಗೆ ಕುಡಿಯುವ ನೀರಿನ ಸೌಲಭ್ಯ ಒದಗಿಸಿಕೊಡಲು ಸರ್ಕಾರ ಸಿದ್ದವಿದೆಯೇ?

ಈ ಕುರಿತಂತೆ ಗುಲ್ಬರ್ಗಾ ಮಹಾನಗರ ಪಾಲಿಕೆಯೊಂದಿಗೆ ಸಮಾಲೋಚಿಸಿ ಹೆಚ್ಚುವರಿ ನೀರಿನ ಲಭ್ಯತೆಯಿದ್ದಲ್ಲಿ, ಸದರಿ ಗ್ರಾಮಗಳಿಗೂ ಕುಡಿಯುವ ನೀರಿನ ಸೌಲಭ್ಯ ಒದಗಿಸಲು ಪರಿಶೀಲಿಸಲಾಗುವುದು

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ **1203(1296)**
ಸದಸ್ಯರ ಹೆಸರು **ಶ್ರೀ ಪಾಟೀಲ್ ಎಂ ವೈ(ಆಫ್ಜಲ್ ಪುರ್)**
ಉತ್ತರಿಸುವವರು **ಶ್ರೀ ಎಸ್ ಎ ರವೀಂದ್ರನಾಥ್ (ಗ್ರಾಮೀಣ ನೀರು ಸರಬರಾಜು,ನೈರ್ಮಲ್ಯ ಹಾಗೂ ಸಕ್ಕರೆ ಸಚಿವರು)**

ಅ) ರಾಜ್ಯದಲ್ಲಿ ರಾಜೀವ್ ಗಾಂಧಿ ಕುಡಿಯುವ ನೀರಿನ ಯೋಜನೆಯು ಮುಂಬೈ–ಕರ್ನಾಟಕ ಭಾಗಕ್ಕೆ ಮಾತ್ರ ಸೀಮಿತವಾಗಿರುವುದಕ್ಕೆ ಕಾರಣವೇನು,

ರಾಜೀವ್ ಗಾಂಧಿ ಕುಡಿಯುವ ನೀರಿನ ಯೋಜನೆಯು ಮುಂಬಯಿ–ಕರ್ನಾಟಕ ಭಾಗಕ್ಕೆ ಸೀಮಿತವಾಗಿರದೆ, ರಾಜ್ಯದ ಎಲ್ಲಾ ಭಾಗಗಳಿಗೂ ಅನ್ವಯಿಸುತ್ತದೆ